## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿ ಕೊಡಗರು ಎಂದು ನಮೂದಾಗಿರುವುದನ್ನು ಕೊಡವ ಎಂದು ಸೇರಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ ಸಕಇ 225 ಬಿಸಿಎ 2000 ದಿನಾಂಕ: 30.03.2002.
2. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವಿಶೇಷ ವರದಿ-2010
3. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಪತ್ರ ಸಂಖ್ಯೆ: ಕರಾಹಿಂವಾ/ಜಾಮದೂ-1/ಸಿಆರ್-17/2020-21, ದಿನಾಂಕ: 28-01-2022.
4. ರಿಟ್ ಅರ್ಜಿ ಸಂಖ್ಯೆ: 48624/2016(GM) ರ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ದಿನಾಂಕ: 08.12.2021

* * * * *

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಭಾರತ ಸಂವಿಧಾನದ ಅನುಚ್ಛೇಧ 15(4)ರಂತೆ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶಾತಿ ಹಾಗೂ ಅನುಚ್ಛೇಧ 16(4)ರನ್ವಯ ಔದ್ಯೋಗಿಕ ನೇಮಕಾತಿಗಳಲ್ಲಿ ಮೀಸಲಾತಿ ಕಲ್ಪಿಸಲು ರಾಜ್ಯದ ಹಿಂದುಳಿದ ವರ್ಗಗಳನ್ನು ಗುರುತಿಸಿ, ಪ್ರವರ್ಗವಾರು ವಿಂಗಡಿಸಿ ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000 ದಿನಾಂಕ:30.03.2002ನ್ನು ಹೊರಡಿಸಲಾಗಿರುತ್ತದೆ. ಈ ಮೀಸಲಾತಿ ಪಟ್ಟಿಯ ಪ್ರವರ್ಗ-3ಎ ಕ್ರ.ಸಂ:2ರಲ್ಲಿ 'ಕೊಡಗರು' ಜಾತಿಯು ನಮೂದಾಗಿರುತ್ತದೆ.

ಮೇಲೆ (2)ರಲ್ಲಿ ಓದಲಾದ ಡಾ.ಸಿ.ಎಸ್ ದ್ವಾರಕನಾಥ್‌ರವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿರುವ ವಿಶೇಷ ವರದಿ-2010ರ ಸಲಹೆ ಸಂಖ್ಯೆ:01ರಲ್ಲಿ ಈ ಕೆಳಕಂಡಂತೆ ಸಲಹೆ ನೀಡಲಾಗಿರುತ್ತದೆ.

> "ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ/225/ಬಿಸಿಎ/ 2000 ದಿನಾಂಕ: 30.03.2002 ರ ಪ್ರವರ್ಗ-3 (ಎ) ಕ್ರಮ ಸಂಖ್ಯೆ: 2 ರಲ್ಲಿ 'ಕೊಡಗರು' ಎಂಬ ಪದವನ್ನು ತೆಗೆದುಹಾಕಿ 'ಕೊಡವ' ಮತ್ತು 'ಕೊಡವರು ಎಂದು ಸೇರಿಸಬಹುದಾಗಿದೆ. ಅಂತಯೇ, ಇಂಗ್ಲೀಷ್ ಪಟ್ಟಿಯಲ್ಲಿ ಸದರಿ ಕ್ರಮಸಂಖ್ಯೆಯಲ್ಲಿ "Kodagaru' ಎನ್ನುವುದನ್ನು ತೆಗೆದು 'Codava, Codavaru', 'Kodava' ಹಾಗೂ Kodavaru' ಎಂದು ಸೇರಿಸಬೇಕೆಂದು ಆಯೋಗವು ಸರ್ಕಾರಕ್ಕೆ ಸಲಹೆ ನೀಡಿರುತ್ತದೆ."

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ 218ನೇ ಸಭೆಯಲ್ಲಿ ಈ ಕೆಳಕಂಡ ತೀರ್ಮಾನ ತೆಗೆದುಕೊಳ್ಳಲಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ.

......2

"ಡಾ.ಸಿ.ಎಸ್. ದ್ವಾರಕನಾಥ್ ನೇತೃತ್ವದ ಆಯೋಗದ ವಿಶೇಷ ವರದಿ-2010ರಲ್ಲಿ ಕೊಡಗರು ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರಕ್ಕೆ ಸಲಹೆಯನ್ನು ನೀಡಿದ್ದು, ಹಿಂದಿನ ಆಯೋಗಗಳು ನೀಡಿದ ಸಲಹೆಗಳು ಸರ್ಕಾರದ ತೀರ್ಮಾನಕ್ಕಾಗಿ ಬಾಕಿ ಇರುವಾಗ ಪುನರ್ ಪರಿಶೀಲಿಸಲು ಹಾಲಿ ಆಯೋಗಕ್ಕೆ ಅವಕಾಶವಿರುವುದಿಲ್ಲದಿರುವುದ ರಿಂದ ಈ ಬಗ್ಗೆ ಸರ್ಕಾರದ ಹಂತದಲ್ಲಿಯೇ ಸೂಕ್ತ ತೀರ್ಮಾನ ತೆಗೆದುಕೊಳ್ಳಬೇಕಾಗುತ್ತದೆ"

ಮೇಲೆ (4) ರಲ್ಲಿ ಓದಲಾದ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:48624/2016(GM) ರಾಷ್ಟ್ರೀಯ ಕೊಡವ ಪರಿಷತ್ತು ವಿರುದ್ಧ ರಾಜ್ಯಸರ್ಕಾರ ಮತ್ತಿತರರು ಪ್ರಕರಣದಲ್ಲಿ ಈ ಕೆಳಕಂಡಂತೆ ಆದೇಶಿಸಿರುತ್ತದೆ.

"In the above Circumstances, This writ petitions succeeds; a Writ of Certiorari issues quashing the impugned orders dated 14.10.2015 & 30.09.2021; consequently, a writ of Mandamus issues to the respondent-Government to accept the subject advice of the Karnataka State commission for Backward Class and issue corrective orders in terms thereof and further, to report"

ಪ್ರಸ್ತಾವನೆಯನ್ನು ಹಾಗೂ ಕೊಡವ ಸಮುದಾಯದಿಂದ ಸ್ವೀಕೃತವಾದ ಮನವಿಗಳಲ್ಲಿನ ಕೋರಿಕೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 04 ಬಿಸಿಎ 2021,**
**ಬೆಂಗಳೂರು ದಿನಾಂಕ: 09.10.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000 ದಿನಾಂಕ:30.03.2002ರ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯ ಪ್ರವರ್ಗ-3ಎ ಕ್ರ.ಸಂ:2ರಲ್ಲಿ ನಮೂದಾಗಿರುವ 'ಕೊಡಗರು'(Kodagaru)' ಎಂಬುದರ ಬದಲಾಗಿ ಕನ್ನಡ ಆವೃತ್ತಿಯಲ್ಲಿ **'ಕೊಡವ'** ಎಂದು ಮತ್ತು ಆಂಗ್ಲ ಆವೃತ್ತಿಯಲ್ಲಿ **'Kodava'** ಎಂದು ಬದಲಾಯಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Hemalatha. M 09/10/2023.
**(ಹೇಮಲತ ಎಂ)**
ಸರ್ಕಾರದ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು,

.......3

2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು,
3. ಎಲ್ಲಾ ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾಂ, ಕಲಬುರಗಿ ವಿಭಾಗಗಳು,
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು,
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಆಯುಕ್ತರ ಮುಖೇನ),
6. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು (ಆಯುಕ್ತರ ಮುಖೇನ.
7. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು,
8. ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ),ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ(ಪ್ರಕರಣ ಸಂಖ್ಯೆ:ಸಿ: ), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ, ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*********